Akashvani : Bangalore
National Bulletin In Kannada
25.09.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

25.09.2025 : 13.10hrs

**********

**ಮುಖ್ಯಾಂಶಗಳು:**

1. ಗ್ರೇಟರ್ ನೊಯ್ಡಾದಲ್ಲಿಂದು ಉತ್ತರಪ್ರದೇಶ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ರೈಲು ಆಧಾರಿತ ಮೊಬೈಲ್ ಲಾಂಚರ್ ವ್ಯವಸ್ಥೆಯಿಂದ ಅಗ್ನಿಪ್ರೇಮ್ ಕ್ಷಿಪಣಿಯ ಪರಿಕ್ಷಾರ್ಥ ಉಡಾವಣೆ ಯಶಸ್ವಿ
3. ಸಾಹಿತ್ಯಾಸಕ್ತರಿಂದ ಸಾರಸತ್ವ ಲೋಕದ ದಿಗ್ಗಜ ಡಾ. ಎಸ್.ಎಲ್. ಭೈರಪ್ಪ ಅವರಿಗೆ ಅಂತಿಮ ನಮನ
4. ಏಷ್ಯಾಕಪ್ ಟಿ-೨೦ ಕ್ರಿಕೆಟ್ ; ಸೂಪರ್-೪ ಹಂತದ ಪಂದ್ಯದಲ್ಲಿಂದು ಬಾಂಗ್ಲಾದೇಶ-ಪಾಕಿಸ್ತಾನ ಮುಖಾಮುಖಿ

**********

ಉತ್ತರ ಪ್ರದೇಶದ ಗ್ರೇಟರ್ ನೋಯ್ಡಾದಲ್ಲಿ ಇಂದು ಉತ್ತರಪ್ರದೇಶ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನ-೨೦೨೫ ಅನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ವ್ಯಾಪಾರ ಪ್ರದರ್ಶನದಲ್ಲಿ ಭಾಗವಹಿಸಲು ಬಂದಿರುವ ಎಲ್ಲಾ ಹೂಡಿಕೆದಾರರು, ವ್ಯಾಪಾರಿಗಳು, ಉದ್ಯಮಿಗಳು ಮತ್ತು ಯುವಕರನ್ನು ಸ್ವಾಗತಿಸಿದರು. ೨ ಸಾವಿರದ ೨೦೦ಕ್ಕೂ ಹೆಚ್ಚು ಪ್ರದರ್ಶಕರು ತಮ್ಮ ಉತ್ಪನ್ನಗಳನ್ನು ಮತ್ತು ಸೇವೆಗಳನ್ನು ಪ್ರದರ್ಶಿಸುತ್ತಿದ್ದಾರೆ ಎಂದು ಹೇಳಿದರು.ವ್ಯಾಪಾರ ಪ್ರದರ್ಶನ ಇದೇ ೨೯ ರವರೆಗೆ ನಡೆಯಲಿದೆ. ಇದು ರಾಜ್ಯದ  ವೈವಿಧ್ಯಮಯ ಕರಕುಶಲ ಸಂಪ್ರದಾಯ, ಆಧುನಿಕ ಕೈಗಾರಿಕೆ, ಬಲಿಷ್ಠ ಎಂಎಸ್ಎಂಇ ಗಳು ಮತ್ತು ಉದಯೋನ್ಮುಖ ಉದ್ಯಮಿಗಳನ್ನು ಒಂದೇ ವೇದಿಕೆಯಡಿ ತರುತ್ತದೆ. ಇಂದು ಮಧ್ಯಾಹ್ನ ರಾಜಸ್ಥಾನಕ್ಕೆ ಪ್ರಧಾನಿ ಮೋದಿ ಭೇಟಿ ನೀಡಲಿದ್ದು, ಒಂದು ಲಕ್ಷ ೨೨ ಸಾವಿರ ೧೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಬನ್ಸ್ವಾರಾದಲ್ಲಿ ಸಾರ್ವಜನಿಕ ಸಮಾರಂಭವನ್ನು ಉದ್ದೇಶಿಸಿ

ಮಾತನಾಡಲಿದ್ದಾರೆ. ಅಲ್ಲದೇ ಪ್ರಧಾನ ಮಂತ್ರಿ ಕುಸುಮ್ ಫಲಾನುಭವಿಗಳೊಂದಿಗೆ ಸಂವಹನ ನಡೆಸಲಿದ್ದಾರೆ. ಇದೇ ವೇಳೆ ಸುಮಾರು ೪೨ ಸಾವಿರ ಕೋಟಿ ರೂಪಾಯಿಗಳ ಅನುಶಕ್ತಿ ವಿದ್ಯುತ್ ನಿಗಮ್ ಲಿಮಿಟೆಡ್‌ನ ಮಹಿ ಬನ್ಸ್‌ವಾರಾ ರಾಜಸ್ಥಾನ ಪರಮಾಣು ವಿದ್ಯುತ್ ಯೋಜನೆಗೆ ಪ್ರಧಾನಿ ಮೋದಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

************

ಭಾರತವು ರೈಲು ಆಧಾರಿತ ಮೊಬೈಲ್ ಲಾಂಚರ್ ವ್ಯವಸ್ಥೆಯಿಂದ ಮಧ್ಯಂತರ ಶ್ರೇಣಿಯ ಅಗ್ನಿಪ್ರೇಮ್ ಕ್ಷಿಪಣಿಯ ಯಶಸ್ವಿ ಉಡಾವಣೆಯನ್ನು ನಡೆಸಿದೆ. ಮುಂದಿನ ಪೀಳಿಗೆಯ ಈ ಕ್ಷಿಪಣಿಯು ೨ ಸಾವಿರ ಕಿಲೋಮೀಟರ್‌ಗಳ ವ್ಯಾಪ್ತಿಯನ್ನು ಕ್ರಮಿಸಲು ವಿನ್ಯಾಸಗೊಳಿಸಲಾಗಿದೆ ಮತ್ತು ವಿವಿಧ ಸುಧಾರಿತ ವೈಶಿಷ್ಟ್ಯಗಳೊಂದಿಗೆ ಇದನ್ನು ಸಜ್ಜುಗೊಳಿಸಲಾಗಿದೆ. ಈ ರೀತಿಯ ಮೊದಲ ಉಡಾವಣೆಯನ್ನು ವಿಶೇಷವಾಗಿ ವಿನ್ಯಾಸಗೊಳಿಸಲಾದ ರೈಲು ಆಧಾರಿತ ಮೊಬೈಲ್ ಲಾಂಚರ್‌ನಿಂದ ನಡೆಸಲಾಯಿತು. ಯಶಸ್ವಿ ಪರೀಕ್ಷೆಗಾಗಿ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಹಾಗೂ ಸಶಸ್ತ್ರ ಪಡೆಗಳನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಭಿನಂದಿಸಿದ್ದಾರೆ.

************

ಮುಂದಿನ ಮೂರು ವರ್ಷಗಳಲ್ಲಿ ೧೫ ಸಾವಿರದ ೩೪ ಕೋಟಿ ರೂಪಾಯಿಗಳ ವೆಚ್ಚದಲ್ಲಿ, ಅಸ್ತಿತ್ವದಲ್ಲಿರುವ ಸರ್ಕಾರೀ ವೈದ್ಯಕೀಯ ಕಾಲೇಜುಗಳು ಮತ್ತು ಸಂಸ್ಥೆಗಳಲ್ಲಿ ೫ ಸಾವಿರದ ೨೩ ಎಂಬಿಬಿಎಸ್ ಸೀಟುಗಳು ಮತ್ತು ೫ ಸಾವಿರ ಸ್ನಾತಕೋತ್ತರ ಸೀಟುಗಳನ್ನು ಸೇರಿಸುವ ಕೇಂದ್ರ ಪ್ರಾಯೋಜಿತ ಯೋಜನೆಯ ಮೂರನೇ ಹಂತಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಉಪಕ್ರಮವು ವೈದ್ಯಕೀಯ ಸಾಮರ್ಥ್ಯವನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ. ಹೆಚ್ಚುವರಿ ಸ್ನಾತಕೋತ್ತರ ಸೀಟುಗಳನ್ನು ಸೃಷ್ಟಿಸುವ ಮೂಲಕ ತಜ್ಞವೈದ್ಯರ ಲಭ್ಯತೆಯನ್ನು ಹೆಚ್ಚಿಸುತ್ತದೆ ಮತ್ತು ಸರ್ಕಾರಿ ವೈದ್ಯಕೀಯ ಸಂಸ್ಥೆಗಳಲ್ಲಿ ವಿಶೇಷ ಸೌಲಭ್ಯಗಳನ್ನು ಪರಿಚಯಿಸಲು ಅನುವು ಮಾಡಿಕೊಡುತ್ತದೆ.

************

ಪದ್ಮಭೂಷಣ, ಸರಸ್ವತಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಡಾ. ಎಸ್.ಎಲ್.ಭೈರಪ್ಪ ಅವರ ನಿಧನಕ್ಕೆ ಸಾಹಿತ್ಯ ಲೋಕದ ಅನೇಕ ದಿಗ್ಗಜ್ಜರು, ಚಿಂತಕರು, ಕಲಾವಿದರು ಕಂಬನಿ ಮಿಡಿದಿದ್ದಾರೆ.ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಇಂದು ನೂರಾರು ಜನರು ಅವರ

ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆಯುತ್ತಿದ್ದಾರೆ. ಎಸ್.ಎಲ್.ಭೈರಪ್ಪ ಅವರ ಬದುಕು ಮತ್ತು ಬರಹ ಕುರಿತು ಹಿರಿಯ ಸಾಹಿತಿ ಡಾ. ಮಂಜುನಾಥ್ ಅಜ್ಜಂಪುರ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದು, ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಧ್ವನಿ : ಡಾ. ಮಂಜುನಾಥ್ ಅಜ್ಜಂಪುರ

ಸಾಹಿತ್ಯ ಲೋಕಕ್ಕೆ ಡಾ. ಎಸ್.ಎಲ್.ಭೈರಪ್ಪನವರ ಕೊಡುಗೆ ಕುರಿತು ಹಿರಿಯ ಚಿಂತಕ ಡಾ. ಜಿ.ಬಿ. ಹರೀಶ್ ತಮ್ಮ ಅನಿಸಿಕೆ ಹಂಚಿಕೊಂಡಿದ್ದು, ಅವರ ನಿಧನಕ್ಕೆ ದುಃಖ ವ್ಯಕ್ತಪಡಿಸಿದ್ದಾರೆ.

ಧ್ವನಿ: ಹಿರಿಯ ಚಿಂತಕ ಡಾ. ಜಿ.ಬಿ. ಹರೀಶ್

ಇಂದು ಮಧ್ಯಾಹ್ನ ಮೈಸೂರಿನ ಕುವೆಂಪು ನಗರದಲ್ಲಿರುವ ಭೈರಪ್ಪನವರ ನಿವಾಸಕ್ಕೆ ಪಾರ್ಥಿವ ಶರೀರ ಆಗಮಿಸಲಿದೆ. ಬಳಿಕ ಮೈಸೂರಿನ ಕಲಾಮಂದಿರದಲ್ಲಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ನಾಳೆ  ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಸಕಲ ಸರ್ಕಾರ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ.

೯೪ ವರ್ಷದ ಎಸ್.ಎಲ್.ಭೈರಪ್ಪನವರು ಪ್ರಸಿದ್ಧ ಕನ್ನಡ ಕಾದಂಬರಿಕಾರ, ತತ್ವಜ್ಞಾನಿ ಮತ್ತು ಅನುಭವಿ ಲೇಖಕರಾಗಿದ್ದು, ೨೦೧೬ರಲ್ಲಿ ಪದ್ಮಶ್ರೀ, ೨೦೨೩ರಲ್ಲಿ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದರು. ೨೦೧೦ರಲ್ಲಿ ಅವರಿಗೆ ಸರಸ್ವತಿ ಸಮ್ಮಾನ್ ಪ್ರಶಸ್ತಿ ಒಲಿದು ಬಂದಿತ್ತು.

ಭೈರಪ್ಪ ಅವರು ಪರ್ವ, ಆವರಣ, ಗೃಹಭಂಗ, ಮತದಾನ, ವಂಶವೃಕ್ಷ, ನಾಯಿನೆರಳು, ದಾಟು, ಉತ್ತರಕಾಂಡ, ಯಾನ, ಕವಲು, ಸಾಕ್ಷಿ ಸೇರಿದಂತೆ ಅನೇಕ ಕಾದಂಬರಿಗಳನ್ನು ಬರೆದಿದ್ದಾರೆ.

************

ನವದೆಹಲಿಯಲ್ಲಿ ಇಂದು ಸೇನಾಪ್ರಧಾನ ಕಚೇರಿಯಲ್ಲಿ ಸ್ವಚ್ಛತೆಯೇ ಸೇವೆ ಅಭಿಯಾನದ ಭಾಗವಾಗಿ ನೈರ್ಮಲ್ಯ ಕಾರ್ಮಿಕರನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಸ್ವಚ್ಛ ಭಾರತ ಅಭಿಯಾನ ಕ್ರಾಂತಿಯ ರೂಪದಲ್ಲಿ ದೇಶದ ಪ್ರತಿಯೊಬ್ಬ ವ್ಯಕ್ತಿಯನ್ನು ತಲಪಿದ ರೀತಿ ಅದ್ಭುತವಾಗಿದೆ. ಆ ಕ್ರಾಂತಿಯ ಭಾಗವಾಗಿ ರಾಷ್ಟ್ರವು ಇಂದು ಸ್ವಚ್ಛತಾ ದಿನವನ್ನು ಆಚರಿಸುತ್ತಿದೆ ಎಂದು ಹೇಳಿದರು. ಇನ್ನೊಂದೆಡೆ ನವದೆಹಲಿಯಲ್ಲಿ ನಡೆದ ಸ್ವಚ್ಛತೆಯೇ ಸೇವೆ ೨೦೨೫ ಅಭಿಯಾನದಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಭಾಗವಹಿಸಿದ್ದರು.

************

ಸೇವೆ ಮತ್ತು ಸುಶಾಸನ ಮಂತ್ರದಿಂದ ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಾರ್ಗದರ್ಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ, ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು ಈ ವಿಶೇಷ ಸರಣಿ - 'ಸೇವಾ ಪರ್ವ'ದಲ್ಲಿ ಕೇಂದ್ರ ಸರ್ಕಾರ ರಕ್ಷಣಾ ರಫ್ತುಗಳನ್ನು ಹೇಗೆ ಹೆಚ್ಚಿಸಿದೆ ಮತ್ತು ಕಾರ್ಯತಂತ್ರದ ಸ್ವಾಧೀನಗಳನ್ನು ಹೇಗೆ ಬಲಪಡಿಸಿದೆ ಎಂಬುದರ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

ಧ್ವನಿ : ವಿಶೇಷ ವರದಿ ಚೇತನ್ (   ಸೆಕೆಂಡ್‌ಗಳು)

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅಡಿಯಲ್ಲಿ ಭಾರತದ ರಕ್ಷಣಾ ಮತ್ತು ಆಂತರಿಕ ಭದ್ರತೆಯು ಶಕ್ತಿ, ಸ್ಪಷ್ಟತೆ ಮತ್ತು ಸ್ವಾವಲಂಬನೆಯ ಕಡೆಗೆ ನಿರ್ಣಾಯಕ ಬದಲಾವಣೆಯನ್ನು ಪ್ರತಿಬಿಂಬಿಸುತ್ತದೆ. ರಕ್ಷಣೆಯಲ್ಲಿ ದಾಖಲೆಯ ಹೂಡಿಕೆಗಳು, ಸ್ಥಳೀಯ ಉತ್ಪಾದನೆಯಲ್ಲಿ ತ್ವರಿತ ಬೆಳವಣಿಗೆ, ದಿಟ್ಟ ಸುಧಾರಣೆಗಳು ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಅಳವಡಿಕೆಯೊಂದಿಗೆ, ಭಾರತವು ಪ್ರಮುಖ ಆಮದುದಾರ ದೇಶದಿಂದ ರಕ್ಷಣಾ ಉಪಕರಣಗಳ ಜಾಗತಿಕ ರಫ್ತುದಾರನಾಗಿ ಪರಿವರ್ತನೆಗೊಂಡಿದೆ.ಕಳೆದ ದಶಕದಲ್ಲಿ ರಕ್ಷಣಾ ರಫ್ತು ೩೪ ಪಟ್ಟು ಹೆಚ್ಚಾಗಿ, ೨೦೨೪-೨೫ರಲ್ಲಿ ೨೩ ಸಾವಿರದ ೬೨೨ ಕೋಟಿ ರೂಪಾಯಿಗಳನ್ನು ತಲುಪಿದೆ. ಅಮೆರಿಕ, ಫ್ರಾನ್ಸ್, ಅರ್ಮೇನಿಯಾ ಸೇರಿದಂತೆ ನೂರಕ್ಕೂ ಹೆಚ್ಚು ದೇಶಗಳಿಗೆ ವ್ಯಾಪಕ ಶ್ರೇಣಿಯ ರಕ್ಷಣಾ ಉತ್ಪನ್ನಗಳನ್ನು ಪೂರೈಸುತ್ತಿದೆ.  ಇವುಗಳಲ್ಲಿ ಬುಲೆಟ್‌ಪ್ರೂಫ್ ಜಾಕೆಟ್‌ಗಳು, ಗಸ್ತು ದೋಣಿಗಳು, ಹೆಲಿಕಾಪ್ಟರ್‌ಗಳು, ರಾಡರ್‌ಗಳು ಮತ್ತು ಟಾರ್ಪಿಡೋಗಳಂತಹ ಸುಧಾರಿತ ವ್ಯವಸ್ಥೆಗಳು ಸೇರಿವೆ.

************

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಸೂಪರ್-೪ ಹಂತದ ಪಂದ್ಯದಲ್ಲಿ ಬಾಂಗ್ಲಾದೇಶ ಮತ್ತು ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಪ್ರಾರಂಭವಾಗಲಿದೆ. ಈ ಪಂದ್ಯದ ಫಲಿತಾಂಶವು ಫೈನಲ್‌ಗೆ ತಲುಪುವ ತಂಡವನ್ನು ನಿರ್ಧರಿಸಲಿದೆ. ಇದೇ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಸೂಪರ್-೪ ಹಂತದ ಪಂದ್ಯದಲ್ಲಿ ಬಾಂಗ್ಲಾದೇಶ ತಂಡವನ್ನು ೪೧ ರನ್‌ಗಳಿಂದ ಸೋಲಿಸಿ ಭಾರತ ಫೈನಲ್ ಪ್ರವೇಶಿಸಿದೆ.

*******END*****